ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಯಲಹಂಕ ವಲಯ

ಸಂಖ್ಯೆ:ಬೃ.ಬೆಂ.ಮ.ಪಾ/ಕಾ.ಪಾ.ಅ/ಬ್ಯಾ.ವಿ/ಪಿ.ಆರ್/60 /2020-21 ಕಾರ್ಯಪಾಲಕ ಅಭಿಯಂತರರು ಕಛೇರಿ
ಬ್ಯಾಟರಾಯನಪುರ ವಿಭಾಗ, ಬಿಬಿಎಂಪಿ,
ಬೆಂಗಳೂರು-92, ದಿನಾಂಕ: 05/02/2021

ಆಡಳಿತಾತ್ಮಕ ಅನುಮೋದನೆ

ವಿಷಯ: Additional fund for R.K.Hegade Nagara Samudaya Bhavan to extend compound and grills

ಉಲ್ಲೇಖ: 1. ಲೆಕ್ಕಶೀರ್ಷಿಕೆ ಪಿ-3727, ಜಾಬ್ ಸಂಕೇತ: 006-20-000011
2. ನಗರಾಭಿವೃದ್ಧಿ ಇಲಾಖೆಯ ಸರ್ಕಾರಿ ಆದೇಶ ಸಂಖ್ಯೆ. ನಅಇ 233 ಎಂಎನ್‌ಬೈ 2020, ಬೆಂಗಳೂರು, ದಿನಾಂಕ: 25-01-2021.

* * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಕಾರ್ಯಪಾಲಕ ಅಭಿಯಂತರರು (ಬ್ಯಾಟರಾಯನಪುರ ವಿಭಾಗ) ಯಲಹಂಕ ವಲಯ ರವರು 2019-20ನೇ ಸಾಲಿನ ಆಯವ್ಯಯದ ಪಿ-3727 ರಡಿಯಲ್ಲಿ ಮೇಲ್ಕಂಡ ಕಾಮಗಾರಿಯನ್ನು ರೂ.80.00 (ಎಂಭತ್ತು ಲಕ್ಷಗಳು ಮಾತ್ರ) ಲಕ್ಷಗಳಿಗೆ ಕಾಮಗಾರಿಯನ್ನು ಕೈಗೊಳ್ಳಲು ಉಲ್ಲೇಖದಂತೆ ಸದರಿ ಕಾಮಗಾರಿಗೆ ಕಾಮಗಾರಿ ಸಂಕೇತ ದೊರೆತಿರುತ್ತದೆ. ಅದರಂತೆ ಕಾರ್ಯಪಾಲಕ ಅಭಿಯಂತರರು (ಬ್ಯಾಟರಾಯನಪುರ) ವಿಭಾಗ ರವರು ಅಂದಾಜು ಪಟ್ಟಿಯನ್ನು ತಯಾರಿಸಿ ಆಡಳಿತಾತ್ಮಕ ಮಂಜೂರಾತಿಗಾಗಿ ಸಲ್ಲಿಸಿರುತ್ತಾರೆ.

ಮುಂದುವರೆದು ನಗರಾಭಿವೃದ್ಧಿ ಇಲಾಖೆಯ ಸರ್ಕಾರಿ ಆದೇಶ ಸಂಖ್ಯೆ. ನಅಇ 233 ಎಂಎನ್‌ಬೈ 2020, ಬೆಂಗಳೂರು, ದಿನಾಂಕ: 25-01-2021 ರಂತೆ ಆಡಳಿತಾತ್ಮಕ ಅನುಮೋದನೆಯನ್ನು ನೀಡಿದ್ದು ಆದೇಶ ಸಂಖ್ಯೆ: ಬಿ12(1)/ಪಿ.ಆರ್/394/2019-20, ದಿನಾಂಕ: 25-09-2019 ರಲ್ಲಿ ನೀಡಿರುವ ಅಧಿಕಾರದನ್ವಯ ಸದರಿ ಕಾಮಗಾರಿಗೆ ಕೆಳಗಿನ ಷರತ್ತುಗಳನ್ವಯ ಆಡಳಿತಾತ್ಮಕ ಅನುಮೋದನೆಯನ್ನು ನೀಡಲಾಗಿದೆ ಹಾಗೂ ಆಡಳಿತಾತ್ಮಕ ಅನುಮೋದನೆ ಪುಸ್ತಕ ಪುಟ ಸಂಖ್ಯೆ 15 ಕ್ರ.ಸಂ 60 ರಲ್ಲಿ ಈ ಕೆಳಗಿನ ಷರತ್ತುಗಳಂತೆ ದಾಖಲಿಸಲಾಗಿದೆ.

ಷರತ್ತುಗಳು:

1. ಅಂದಾಜು ಪಟ್ಟಿಯ ಮೊತ್ತ ರೂ 2.00 ಲಕ್ಷಗಳಿಗೆ ಮೀರಿದ ಕಾಮಗಾರಿಗಳಿಗೆ ಟೆಂಡರ್ ಕರೆಯುವುದು.
2. ರಸ್ತೆ ಇತಿಹಾಸ ಪುಸ್ತಕದಲ್ಲಿ (Road History book/Register) ಈ ಕೆಲಸದ ವಿವರಗಳನ್ನು ದಾಖಲಿಸಿ ಕ್ರಮಬದ್ಧಗೊಳಿಸುವುದು.
3. ಧರಪಟ್ಟಿ ಆಧಾರಿತವಲ್ಲದ ಅಂಶಗಳಿಗೆ ಡೆಟಾ ಧರವನ್ನು ತಯಾರಿಸಿ ಅನುಮೋದನೆ ಪಡೆಯುವುದು.
4. ಅಂದಾಜು ಪಟ್ಟಿಯಲ್ಲಿ ಮಾರುಕಟ್ಟೆ ದರ ಅಳವಡಿಸಿಕೊಂಡಿರುವ ಅಂಶಗಳಿಗೆ ಕೊಟೇಷನ್ ಕರೆದು ಅನುಮೋದನೆ ಪಡೆಯುವುದು.
5. ಕೆಲಸದ ಸ್ಥಳದಿಂದ ಸಾಗಣೆ ದೂರಕ್ಕೆ ಅನುಮೋದನೆ ಪಡೆಯುವುದು.
6. ಆರ್.ಸಿ.ಸಿ ಡೆಕ್‌ಸ್ಲಾಬ್, ಹರಿನೀರು ಮೋರಿಯ ಆಸರೆಗೋಡೆ ಮತ್ತು ಸೇತುವೆ ಕೆಲಸಗಳ ನಿರ್ವಹಣೆಗೆ ಮೊದಲು ವಿನ್ಯಾಸಕ್ಕೆ ಅನುಮೋದನೆ ಪಡೆಯುವುದು.
7. ಮೇಲಿನ ಕೆಲಸದ ವೆಚ್ಚವನ್ನು ಉಪ ಅನುದಾನದಡಿಯಲ್ಲಿ ಭರಿಸುವುದು.
8. ಬಿ.ಎಂ./ಬಿ.ಸಿ. ಅಳವಡಿಸಿಕೊಂಡಿರುವ ರಸ್ತೆಗಳಿಗೆ ನಿಯಮಾನುಸಾರ ಪರೀಕ್ಷೆಗಳನ್ನು ಕೈಗೊಂಡು ಫಲಿತಾಂಶದ ವರದಿಗಳನ್ನು ಪಡೆದುಕೊಳ್ಳುವುದು.
9. ಸದರಿ ಕೆಲಸವು ಎಂಬ್ಯಾಕ್ ಮೆಂಟ್/ಕಾಂಕ್ರೀಟ್/ಡಾಂಬರೀಕರಣ-ಬಿಎಂ-ಬಿಸಿ/WMM-WBM ಕಾಮಗಾರಿಗಳಾಗಿದ್ದಲ್ಲಿ, MORT & H ಅನ್ವಯ ಗುಣಮಟ್ಟ ಪರೀಕ್ಷೆ ಹಾಗೂ Core-cut ಪರೀಕ್ಷೆಗಳನ್ನು ಕೈಗೊಂಡು ಫಲಿತಾಂಶವನ್ನು ಪಡೆದುಕೊಳ್ಳುವುದು.

ಕಾರ್ಯಪಾಲಕ ಅಭಿಯಂತರರು
ಬ್ಯಾಟರಾಯನಪುರ ವಿಭಾಗ,
ಬಿ.ಬಿ.ಎಂ.ಪಿ ಬೆಂಗಳೂರು-92

ಪ್ರತಿಯನ್ನು:
1) ಮಾನ್ಯ ಜಂಟಿ ಆಯುಕ್ತರು (ಯಲಹಂಕ) ವಲಯ, ಬಿ.ಬಿ.ಎಂ.ಪಿ ರವರ ಮಾಹಿತಿಗಾಗಿ.
2) ಕಾರ್ಯಪಾಲಕ ಅಭಿಯಂತರರು (ಗುಣ ನಿಯಂತ್ರಣ) ವಿಭಾಗ ರವರ ಮಾಹಿತಿಗಾಗಿ.